# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಹೆಚ್. ಟಾಟಾಶಿವನ್, ವ್ಯವಸ್ಥಾಪಕರು (ತಾಂತ್ರಿಕ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ಇವರನ್ನು ಗುತ್ತಿಗೆ ಆಧಾರದ ಮೇಲೆ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ನೇಮಿಸುವ ಬಗ್ಗೆ – ಆದೇಶ.

ಓದಲಾಗಿದೆ:- ಉಪ ಪ್ರಧಾನ ವ್ಯವಸ್ಥಾಪಕರು (ಸಿ&ಆ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ KSFC/H.O./Pers/810 ದಿನಾಂಕ 25-11-2013.

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ 25-11-2013ರ ಪತ್ರದಲ್ಲಿ ಉಪ ಪ್ರಧಾನ ವ್ಯವಸ್ಥಾಪಕರು (ಸಿ&ಆ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು, ಇವರು ಶ್ರೀ ಹೆಚ್.ಟಾಟಾಶಿವನ್, ವ್ಯವಸ್ಥಾಪಕರು (ತಾಂತ್ರಿಕ), ಇವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್‌ರ ಹುದ್ದೆಗೆ ನೇಮಿಸಲು ಸಂಸ್ಥೆಯ ಅಭ್ಯಂತರವೇನು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಶ್ರೀ ಹೆಚ್. ಟಾಟಾಶಿವನ್, ವ್ಯವಸ್ಥಾಪಕರು (ತಾಂತ್ರಿಕ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ಇವರನ್ನು ಗುತ್ತಿಗೆ ಆಧಾರದ ಮೇಲೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಶಿವಮೊಗ್ಗ ಇಲ್ಲಿ ಶ್ರೀ ಜೆ.ಬಿ.ರೇವಣಸಿದ್ಧಪ್ಪ, ಕಾರ್ಯಪಾಲಕ ಇಂಜಿನಿಯರ್ ಇವರ ವರ್ಗಾವಣೆಯಿಂದ ತೆರವಾದ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಲು ಸರ್ಕಾರವು ನಿರ್ಧರಿಸಿದೆ.

ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 15 (i) (ಬಿ) (ii) ರಲ್ಲಿ ತಾಂತ್ರಿಕ ವಿದ್ಯಾರ್ಹತೆಗೆ ಬೇಕಾಗುವ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಿಸಲು ಅವಕಾಶ ಕಲ್ಪಿಸಲಾಗಿದೆ. ಈ ಗುತ್ತಿಗೆ ನೇಮಕಾತಿಯನ್ನು ಸರ್ಕಾರದ ಸುತ್ತೋಲೆ ಸಂಖ್ಯೆ. ಸಿಆಸುಇ 37 ಸೇನೆನಿ 99, ದಿನಾಂಕ. 25-08-1999ರ ಮತ್ತು ಸುತ್ತೋಲೆ ಸಂಖ್ಯೆ. ಸಿಆಸುಇ 41 ಸೇನೆನಿ 2002, ದಿನಾಂಕ. 09-01-2003ರ ಮಾರ್ಗಸೂಚಿಗಳನ್ವಯ ಪರಿಶೀಲಿಸಲಾಗಿದೆ.

ಶ್ರೀ ಹೆಚ್. ಟಾಟಾಶಿವನ್, ವ್ಯವಸ್ಥಾಪಕರು (ತಾಂತ್ರಿಕ) ಇವರು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಅಧಿಕಾರಿಯಾಗಿರುತ್ತಾರೆ. ಇವರ ಗುತ್ತಿಗೆ ನೇಮಕಕ್ಕೆ ಸಂಬಂಧಿಸಿದಂತೆ ವೇತನ ಮತ್ತು ಇತರೆ ಭತ್ಯೆ ಹಾಗೂ ಸೇವಾ ಷರತ್ತುಗಳನ್ನು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ (ಸಾಉಮ) 24 ಎಂಇವ 2002, ದಿನಾಂಕ. 05-03-2002 ರನ್ವಯ ಒಪ್ಪಂದ ಮಾಡಿಕೊಂಡು ಗುತ್ತಿಗೆ ಆಧಾರದ ಮೇಲೆ ಮೇಲ್ಕಂಡ ಹುದ್ದೆಗೆ ನೇಮಿಸಲು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

***ಆದೇಶ ಸಂಖ್ಯೆ: ಗ್ರಾಅಪ 304 ಸೇಶಿಕಾ 2013, ಬೆಂಗಳೂರು, ದಿನಾಂಕ 26-11-2013***

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ , ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 15(1)(ಬಿ)(ii) ರನ್ವಯ ಮತ್ತು ಈ ಆದೇಶಕ್ಕೆ ಲಗತ್ತಿಸಿರುವ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಶ್ರೀ ಹೆಚ್. ಟಾಟಾಶಿವನ್,

---2

ವ್ಯವಸ್ಥಾಪಕರು (ತಾಂತ್ರಿಕ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ಇವರನ್ನು ಗುತ್ತಿಗೆ ಆಧಾರದ ಮೇಲೆ ಈ ಆದೇಶ ಹೊರಡಿಸಿದ ದಿನಾಂಕದಿಂದ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆವಿಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಶಿವಮೊಗ್ಗ ಇಲ್ಲಿ ಶ್ರೀ ಬಿ.ಜೆ.ರೇವಣಸಿದ್ಧಪ್ಪ, ಕಾರ್ಯಪಾಲಕ ಇಂಜಿನಿಯರ್ ಇವರ ವರ್ಗಾವಣೆಯಿಂದ ತೆರವಾದ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ;

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ / ಜಲಸಂಪನ್ಮೂಲ ಇಲಾಖೆ.
3. ಉಪ ಪ್ರಧಾನ ವ್ಯವಸ್ಥಾಪಕರು (ಸಿ&ಆ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಪ್ರಧಾನ ಕಚೇರಿ, ನಂ.1/1, ತಿಮ್ಮಯ್ಯ ರಸ್ತೆ, ಕಂಟೋನ್ಮೆಂಟ್ ರೈಲ್ವೆ ಸ್ಟೇಷನ್ ಹತ್ತಿರ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು,
6. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾಫಿ ಬೋರ್ಡ್, ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ.
9. ಸಂಬಂಧಪಟ್ಟ ಅಧಿಕಾರಿಗೆ.
10. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಹೆಚ್ಚುವರಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
13. ಹೆಚ್ಚುವರಿ ಪ್ರತಿ:ರಕ್ಷಾ ಕಡತ:ಮಾಹಿತಿ ಕೇಂದ್ರ

## ಗುತ್ತಿಗೆ / ಒಪ್ಪಂದದ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು

1. **ಅವಧಿ:** ಶ್ರೀ ಹೆಚ್. ಟಾಟಾಶಿವನ್, ವ್ಯವಸ್ಥಾಪಕರು (ತಾಂತ್ರಿಕ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಇವರ ಒಪ್ಪಂದದ ನೇಮಕಾತಿಯ ದಿನಾಂಕದಿಂದ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆವಿಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ

2. **ಗುತ್ತಿಗೆ ನೇಮಕಾತಿಯ ಪ್ರಾರಂಭ ಹಾಗೂ ಅಂತ್ಯ :** ಸದರಿ ಅಧಿಕಾರಿರವರ ಒಪ್ಪಂದದ ನೇಮಕಾತಿಯು ಸದರಿ ಹುದ್ದೆಯ ಕಾರ್ಯಭಾರ ವಹಿಸಿಕೊಂಡ ದಿನಾಂಕದಿಂದ ಪ್ರಾರಂಭಗೊಂಡು ಹುದ್ದೆಯ ಪ್ರಭಾರವನ್ನು ಹಿಂದಕ್ಕೆ ವಹಿಸಿಕೊಟ್ಟ ದಿನಾಂಕದಂದು ಮುಕ್ತಾಯಗೊಳ್ಳುತ್ತದೆ.

3. **ವೇತನ ಮತ್ತು ಇತರೆ ಭತ್ಯೆಗಳು:** ಶ್ರೀ ಹೆಚ್. ಟಾಟಾಶಿವನ್, ವ್ಯವಸ್ಥಾಪಕರು (ತಾಂತ್ರಿಕ) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಇವರು ಒಪ್ಪಂದದ ನೇಮಕಾತಿಯ ಅವಧಿಯಲ್ಲಿ ಅವರ ಮಾತೃ ಇಲಾಖೆಯಲ್ಲಿ ಪಡೆಯುತ್ತಿದ್ದ ವೇತನ, ತುಟ್ಟಿಭತ್ಯೆ, ಕಾರ್ಯನಿರ್ವಹಿಸುವ ಸ್ಥಳಕ್ಕೆ ಅನ್ವಯಿಸುವ ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಆದರೆ, ನಿಯೋಜನೆಯ ಭತ್ಯೆ, ಅನ್ಯ ಸೇವಾ ಭತ್ಯೆ ಅಥವಾ ಇನ್ನಾವುದೇ ಭತ್ಯೆ, ಹೆಚ್ಚಿನ ಕಾಲದ ಭತ್ಯೆ, ಬೋನಸ್, ಅನುಗ್ರಹ ಪೂರ್ವ ಭತ್ಯೆ ಪಡೆಯಲು ಅರ್ಹರಲ್ಲ.

4. **ರಜಾ ನಿಯಮಗಳು:** ಇವರ ಮಾತೃ ಇಲಾಖೆಯಲ್ಲಿನ ರಜಾ ನಿಯಮಗಳಿಗೆ ಅರ್ಹರಿರುತ್ತಾರೆ.

5. **ರಜಾ ವೇತನ ವಂತಿಗೆ :** ಅಧಿಕಾರಿಯವರ ಮೂಲ ವೇತನದ ಶೇಕಡಾ 11 ರಷ್ಟನ್ನು ರಜಾ ವೇತನ ವಂತಿಗೆಯಾಗಿ ಸರ್ಕಾರವು ಪಾವತಿಸುತ್ತದೆ.

6. **ಭವಿಷ್ಯ ನಿಧಿ ವಂತಿಗೆ:** ಅಧಿಕಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇ.12ರಷ್ಟನ್ನು ಸರ್ಕಾರದ ವತಿಯಿಂದ ವಂತಿಗೆ, ಮತ್ತು ಅಧಿಕಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇಕಡಾ 12 ರಷ್ಟನ್ನು ವಂತಿಗೆಯಾಗಿ ತಿಂಗಳಿನ ಸಂಬಳದಲ್ಲಿ ಕಟಾಯಿಸಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ರವರಿಗೆ ಪಾವತಿಸತಕ್ಕದ್ದು.

7. **ಉಪದಾನ ವಂತಿಗೆಗಳು:** ಸರ್ಕಾರವು ಪ್ರತಿ ತಿಂಗಳು 8.33% ರಷ್ಟು ವೇತನ ಮತ್ತು ಅದಕ್ಕೆ ಸಮನಾದ ತುಟ್ಟಿ ಭತ್ಯೆಯೊಂದಿಗೆ ಉಪದಾನ ವಂತಿಗೆಯಾಗಿ ನೀಡುತ್ತದೆ.

8. **ವೈದ್ಯಕೀಯ ರಿಯಾಯಿತಿ:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ಅನ್ವಯಂ ವೈದ್ಯಕೀಯ ವೆಚ್ಚವನ್ನು ಪಡೆಯಲು ಅರ್ಹರಿರುತ್ತಾರೆ.

9. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ನಿಗಧಿಪಡಿಸಿರುವ ಕೆಲಸಗಳನ್ನು ಹಾಗೂ ಸರ್ಕಾರವು / ಮೇಲಾಧಿಕಾರಿಗಳು ಕಾಲಕಾಲಕ್ಕೆ ವಹಿಸಿಕೊಡುವ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

10. 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮಾವಳಿಗೆ ಅವರು ಬದ್ಧರಾಗಿರುತ್ತಾರೆ.

11. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.

12. ಶ್ರೀ ಹೆಚ್. ಟಾಟಾಶಿವನ್, ವ್ಯವಸ್ಥಾಪಕರು (ತಾಂತ್ರಿಕ) ರವರು ಕಾರ್ಯಪಾಲಕ ಇಂಜಿನಿಯರ್ ಹುದ್ದೆಯ ಕೆಲಸ ಕಾರ್ಯಗಳನ್ನು ನಿಯಮಾನುಸಾರ ನಿರ್ವಹಿಸತಕ್ಕದ್ದು ಹಾಗೂ ಕರ್ತವ್ಯಗಳನ್ನು ನಿರ್ವಹಿಸುವಾಗ ಕಚೇರಿಯ ಗೌಪ್ಯತೆಯನ್ನು ಕಾಪಾಡತಕ್ಕದ್ದು.

13. ಅಧಿಕಾರಿಯ ದುರ್ನಡತೆಯಿಂದ ಸರ್ಕಾರಕ್ಕೆ ಉಂಟಾಗುವ ಯಾವುದೇ ನಷ್ಟಗಳನ್ನು ಭರಿಸಿಕೊಡಲು ಅಧಿಕಾರಿಯು ಭಾದ್ಯತೆಯುಳ್ಳವರಾಗಿರುತ್ತಾರೆ.

14. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು (ರೂ. 50-00) ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸಲ್ಲಿಸುವುದು.

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.